ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ವಿಷಯ: ಮೈಸೂರು ವಿಶ್ವವಿದ್ಯಾನಿಲಯದಲ್ಲಿ ರಚಿಸಲಾಗಿರುವ **'ಇಲಾಖಾ ತಾಂತ್ರಿಕ ಸಲಹಾ ಸಮಿತಿ'** ಗೆ ವಯೋನಿವೃತ್ತಿಯಿಂದ ತೆರವಾದ ಸ್ಥಾನಕ್ಕೆ ಹೊಸದಾಗಿ ಸದಸ್ಯರನ್ನು ಸೇರ್ಪಡೆಗೊಳಿಸುವ ಬಗ್ಗೆ.

ಉಲ್ಲೇಖ:1) ಸರ್ಕಾರದ ಉಪಕಾರ್ಯದರ್ಶಿ, ತಾಂತ್ರಿಕ ಶಿಕ್ಷಣ ಮತ್ತು ಯೋಜನೆ, ಉನ್ನತ ಶಿಕ್ಷಣ ಇಲಾಖೆ,ಬೆಂಗಳೂರು,ಇವರ ಸಂಖ್ಯೆ:ಇಡಿ84/ಎಚ್‌ಪಿಟಿ/2022,ದಿನಾಂಕ:03.06.2022.

2) ಸರ್ಕಾರದ ಅಧೀನಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು,ಇವರ ಸಂಖ್ಯೆ:ಸಿಆಸುಇ39/ಇಜಿಎಂ2921,ದಿನಾಂಕ:10.05.2022.

3) ಈ ಕಚೇರಿ ಅಧಿಸೂಚನೆ ಸಂಖ್ಯೆ:ಡಿವಿ2/102/ಇತರೆ ಪತ್ರಗಳು/2020 21, ದಿನಾಂಕ:06.12.2022 ಮತ್ತು ದಿನಾಂಕ: 20.03.2023.

4) ಸನ್ಮಾನ್ಯ ಕುಲಪತಿಗಳ ಆದೇಶ ದಿನಾಂಕ: 19.01.2026.

<u>ಪ್ರಸ್ತಾವನೆ</u>

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಎಲ್ಲಾ ಇಲಾಖೆಗಳಿಗೆ ಹಾರ್ಡ್‌ವೇರ್, ಸಾಫ್ಟ್‌ವೇರ್ ಇತರೆ ಐ.ಟಿ ಪರಿಕರ ಮತ್ತು ಸೇವೆಗಳನ್ನು ಪಡೆಯುವ ಸಲುವಾಗಿ ಹಾಗೂ ವಿವಿಧ ಇಲಾಖೆಗಳ ಗಣಕೀಕರಣ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲು ಇಲಾಖಾ ತಾಂತ್ರಿಕ ಸಲಹಾ ಸಮಿತಿಗಳನ್ನು ರಚಿಸಲು ಸರ್ಕಾರದ ವತಿಯಿಂದ ಸದಸ್ಯರುಗಳ ನಾಮನಿರ್ದೇಶನ ಮಾಡಿ ಸರ್ಕಾರವು ಆದೇಶಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ(3)ರಲ್ಲಿ ಈಗಾಗಲೇ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಸಮಿತಿಯ ಸದಸ್ಯರುಗಳ ಪೈಕಿ ಶ್ರೀ.ಸುರೇಶ, ಪ್ರಾಧ್ಯಾಪಕರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ವಯೋನಿವೃತ್ತಿಯಿಂದ ತೆರವಾದ ಸ್ಥಾನಕ್ಕೆ ಬೇರೊಬ್ಬರ ಹೆಸರನ್ನು ನಾಮ ನಿರ್ದೇಶನ ಮಾಡುವಂತೆ ಕೋರಲಾಗಿ, ಈ ಕೆಳಕಂಡ ಆದೇಶ:

****

**<u>ಆದೇಶ ದಿನಾಂಕ: ಡಿವಿ2/102/ಇತರೆ ಪತ್ರಗಳು/2020-21, ದಿನಾಂಕ:21 .01.2026</u>**

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ವಿಭಾಗಗಳು/ಕೇಂದ್ರಗಳು/ಆಡಳಿತ ಇಲಾಖೆಗಳಿಗೆ ಹಾರ್ಡ್‌ವೇರ್, ಸಾಫ್ಟ್‌ವೇರ್ ಇತರೆ ಐ.ಟಿ ಪರಿಕರ ಮತ್ತು ಸೇವೆಗಳನ್ನು ಪಡೆಯುವ ಸಲುವಾಗಿ ಹಾಗೂ ವಿವಿಧ ಇಲಾಖೆಗಳ ಗಣಕೀಕರಣ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲು **'ಇಲಾಖಾ ತಾಂತ್ರಿಕ ಸಲಹಾ ಸಮಿತಿ'** ಯನ್ನು ಸರ್ಕಾರದಿಂದ ನಾಮನಿರ್ದೇಶನಗೊಂಡಿರುವ ಹೆಸರಿನೊಂದಿಗೆ ಉಲ್ಲೇಖ (3) ರ ಅಧಿಸೂಚನೆಯಲ್ಲಿ ಹೊರಡಿಸಲಾಗಿದ್ದು, ಸದರಿ ಪಟ್ಟಿಯಲ್ಲಿ ಸದಸ್ಯರಾಗಿ ನೇಮಕಗೊಂಡಿದ್ದ ಶ್ರೀ.ಸುರೇಶ, ಪ್ರಾಧ್ಯಾಪಕರು (ನಿವೃತ್ತ), ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ವಯೋನಿವೃತ್ತಿಯಿಂದ ತೆರವಾದ ಸ್ಥಾನಕ್ಕೆ ಶ್ರೀ.ಮಂಜುನಾಥ.ಎಸ್.ಜೆ, ಪ್ರಾಧ್ಯಾಪಕರು ಮತ್ತು ಡೀನರು, ವಿಶ್ವವಿದ್ಯಾನಿಲಯ ತಾಂತ್ರಿಕ ಕಾಲೇಜು, ಮಾನಸಗಂಗೋತ್ರಿ, ಮೈಸೂರು ಇವರನ್ನು ಸದಸ್ಯರಾಗಿ ನೇಮಿಸಿ ಆದೇಶ ಹೊರಡಿಸಲಾಗಿದೆ.

ಉಳಿದಂತೆ ಉಲ್ಲೇಖ (3) ರ ಅಧಿಸೂಚನೆಯು ಯಥಾವತ್ತಾಗಿರುತ್ತದೆ.

ಆದೇಶದ ಮೇರೆಗೆ,

21/1/2026

ಕುಲಸಚಿವರು

ಇವರಿಗೆ,

1. ಶ್ರೀ.ಮಂಜುನಾಥ.ಎಸ್.ಜೆ, ಪ್ರಾಧ್ಯಾಪಕರು ಮತ್ತು ಡೀನರು, ವಿಶ್ವವಿದ್ಯಾನಿಲಯ ತಾಂತ್ರಿಕ ಕಾಲೇಜು, ಮಾನಸಗಂಗೋತ್ರಿ, ಮೈಸೂರು.
2. ಶ್ರೀ.ಸುರೇಶ, ಪ್ರಾಧ್ಯಾಪಕರು (ನಿವೃತ್ತ), ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
3. ಎಲ್ಲಾ ವಿಭಾಗದ ಮುಖ್ಯಸ್ಥರುಗಳಿಗೆ-ನಿಮ್ಮ ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಹಾಗೂ ನಿಮ್ಮ ಸಹದ್ಯೋಗಿ ಮಿತ್ರರ ಗಮನಕ್ಕೆ ತರುವುದು.
4. ಪ್ರಾಂಶುಪಾಲರು, ಮಹಾರಾಜ ಕಾಲೇಜು, ಯುವರಾಜ ಕಾಲೇಜು, ಸಂಜೆ ಕಾಲೇಜು, ಲಲಿತ ಕಲೆಗಳ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

ಪು.ತಿ.ನೋ

MSD-22

5. ಉಪಕುಲಸಚಿವರು/ಸಹಾಯಕ ಕುಲಸಚಿವರು, ಆಡಳಿತ ಶಾಖೆ ಮತ್ತು ಪರೀಕ್ಷಾಂಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಉಪಹಣಕಾಸು ಅಧಿಕಾರಿಗಳು/ಸಹಾಯಕ ಹಣಕಾಸು ಅಧಿಕಾರಿಗಳು, ಹಣಕಾಸು ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.
8. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಸಂಯೋಜಕರು, ಐ.ಓ.ಇ ಯೋಜನೆ, ವಿಜ್ಞಾನ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಚೇರಿ ಪ್ರತಿ.